# ಯಶಸ್ವಿನಿ ಸಹಕಾರಿ ಸದಸ್ಯರ ಆರೋಗ್ಯ ರಕ್ಷಣಾ ಟ್ರಸ್ಟ್

# 70, 2ನೇ ಮಹಡಿ, ವೈದ್ಯಕೀಯ ಭವನ, ಕೆ.ಆರ್. ರಸ್ತೆ, ಬಸವನಗುಡಿ, ಬೆಂಗಳೂರು-560 004

ಇ-ಮೇಲ್: yeshtrust1@gmail.com । ದೂ ಸಂ: 080-26671616


## ಯಶಸ್ವಿನಿ ಯೋಜನೆಯಡಿಯಲ್ಲಿ ನೋಂದಾಯಿಸಿಕೊಳ್ಳಲು ಅರ್ಹತೆ, ದೊರಕುವ ಸೌಲಭ್ಯಗಳು ಮತ್ತು ಯೋಜನೆ ಪ್ರಯೋಜನ ಪಡೆಯಲು ಅನುಸರಿಸಬೇಕಾದ ಕ್ರಮಗಳ ವಿವರ (ಸದಸ್ಯರ ಉಪಯೋಗಕ್ಕಾಗಿ)

ಯಶಸ್ವಿನಿ ಸಹಕಾರಿ ಸದಸ್ಯರ ಆರೋಗ್ಯ ರಕ್ಷಣಾ ಯೋಜನೆ ಸಹಕಾರಿಗಳಿಗಾಗಿ ಇರುವ ಒಂದು ವಿಶೇಷ ಯೋಜನೆಯಾಗಿದೆ. ಈ ಯೋಜನೆಯಡಿ ಫಲಾನುಭವಿಗಳು ರಾಜ್ಯದ ಯಾವುದೇ ಯಶಸ್ವಿನಿ ನೆಟ್‌ವರ್ಕ್ ಆಸ್ಪತ್ರೆಯಲ್ಲಿ ನಗದು ರಹಿತ ಚಿಕಿತ್ಸೆ ಪಡೆಯಲು ಅವಕಾಶ ಇರುತ್ತದೆ.

**<u>ಯಶಸ್ವಿನಿ ಯೋಜನೆಯಡಿ ನೋಂದಾಯಿಸಿಕೊಳ್ಳಲು ಅರ್ಹತೆ:</u>**

- ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಯಾವುದೇ ಸಹಕಾರಿ ಸಂಘದ ಸದಸ್ಯರು ಮತ್ತು ಅವರ ಕುಟುಂಬ ವರ್ಗದವರಿಗೆ ಯಶಸ್ವಿನಿ ಯೋಜನೆಯು ಅನ್ವಯಿಸುತ್ತದೆ.
- ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳ ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ವತಿಯಿಂದ ಸಂಘಟಿಸಲ್ಪಟ್ಟಿರುವ ಎಲ್ಲಾ ಗ್ರಾಮೀಣ ಸ್ವ-ಸಹಾಯ ಗುಂಪುಗಳ ಸದಸ್ಯರು ಹಾಗೂ ಸಹಕಾರ ಸಂಘಗಳಿಂದ ರಚಿಸಲ್ಪಟ್ಟಿರುವ ಮತ್ತು ಸಹಕಾರ ಸಂಘಗಳಲ್ಲಿ ಖಾತೆ ಹೊಂದಿರುವ ನಗರ ಪ್ರದೇಶದ ಸ್ವ-ಸಹಾಯ ಗುಂಪುಗಳ ಸದಸ್ಯರು ಹಾಗೂ ಅವರ ಕುಟುಂಬ ಸದಸ್ಯರು ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹತೆ ಹೊಂದಿರುತ್ತಾರೆ.
- ಯಾವುದೇ ಸಹಕಾರಿ ಸಂಘ/ಸ್ವ-ಸಹಾಯ ಗುಂಪಿನಲ್ಲಿ ಕುಟುಂಬದ ಒಬ್ಬ ವ್ಯಕ್ತಿ ಸದಸ್ಯನಾಗಿ ಮೂರು ತಿಂಗಳು ಗತಿಸಿದ್ದಲ್ಲಿ ಅವರ ಕುಟುಂಬವನ್ನು ಒಂದು ಘಟಕವನ್ನಾಗಿ ಪರಿಗಣಿಸಿ ವಾರ್ಷಿಕ ವಂತಿಗೆ ಪಾವತಿಸಿ ಯಶಸ್ವಿನಿ ಯೋಜನೆ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ. ಕುಟುಂಬ ಎಂದರೆ ಪ್ರಧಾನ ಅರ್ಜಿದಾರರ (Principal Member) ತಂದೆ, ತಾಯಿ, ಗಂಡ/ಹೆಂಡತಿ, ಗಂಡು ಮಕ್ಕಳು, ಮದುವೆಯಾಗದ ಹೆಣ್ಣು ಮಕ್ಕಳು, ಸೊಸೆಯಂದಿರು ಮತ್ತು ಮೊಮ್ಮಕ್ಕಳು ಎಂದು ಅರ್ಥೈಯಿಸುವುದು.
- ಗ್ರಾಮೀಣ ಸಹಕಾರ ಸಂಘಗಳ/ಸ್ವ-ಸಹಾಯ ಗುಂಪುಗಳ ನಾಲ್ಕು ಸದಸ್ಯರ ಕುಟುಂಬ ಒಂದಕ್ಕೆ ವಾರ್ಷಿಕ ರೂ.500/-ಗಳ ವಂತಿಗೆ ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಕುಟುಂಬದ ಪ್ರತಿಯೊಬ್ಬ ಸದಸ್ಯರಿಗೆ ಶೇ.20 ರಷ್ಟು ಹೆಚ್ಚುವರಿಯಾಗಿ ಅಂದರೆ ಪ್ರತಿ ಹೆಚ್ಚುವರಿ ಸದಸ್ಯರಿಗೆ ರೂ.100/- ಪಾವತಿಸತಕ್ಕದ್ದು,
- ನಗರ ಸಹಕಾರ ಸಂಘಗಳ ಗರಿಷ್ಠ ನಾಲ್ಕು ಸದಸ್ಯರ ಕುಟುಂಬ ಒಂದಕ್ಕೆ ವಾರ್ಷಿಕ ರೂ.1,000/-ಗಳ ವಂತಿಗೆ ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಕುಟುಂಬದ ಪ್ರತಿಯೊಬ್ಬ ಸದಸ್ಯರಿಗೆ ಶೇ.20 ರಷ್ಟು ಹೆಚ್ಚುವರಿಯಾಗಿ ಅಂದರೆ ಪ್ರತಿ ಹೆಚ್ಚುವರಿ ಸದಸ್ಯರಿಗೆ ರೂ.200/-ಗಳನ್ನು ಪಾವತಿಸತಕ್ಕದ್ದು.
- ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸದಸ್ಯರುಗಳಿಗೆ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪ ಯೋಜನೆಯಡಿ ಸಹಾಯ ಧನ ನೀಡುವ ಮೂಲಕ ಅವರ ವಾರ್ಷಿಕ ಸದಸ್ಯತ್ವದ ವಂತಿಗೆಯನ್ನು ಸರ್ಕಾರವೇ ಭರಿಸುತ್ತದೆ.

- ಸಹಕಾರಿ ಮೀನುಗಾರರು, ಸಹಕಾರಿ ಬೀಡಿ ಕಾರ್ಮಿಕರು ಮತ್ತು ಸಹಕಾರಿ ನೇಕಾರರು ಕೂಡ ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.

- ಮದುವೆಯಾಗಿರುವ ಹೆಣ್ಣು ಮಗಳು ಹಾಗು ಅವಳ ಮಕ್ಕಳು ತಂದೆ/ತಾಯಿ/ಅಣ್ಣ/ತಮ್ಮ ಕುಟುಂಬದಲ್ಲಿಯೇ ಪ್ರಧಾನ ಅರ್ಜಿದಾರರ ಕುಟುಂಬದಲ್ಲಿಯೇ ಅಂದರೆ ಯಾವುದೇ ಕಾರಣಕ್ಕೆ ವಾಸವಾಗಿದ್ದರೆ ಅವರ ಪಾಲಿನ ವಂತಿಗೆ ಹಣ ಪಾವತಿಸಿದರೆ ಈ ಯೋಜನೆ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ. ಅದಾಗ್ಯೂ ಪ್ರಸಕ್ತ ಸಾಲಿನ ಯೋಜನೆಯ ಅವಧಿಯಲ್ಲಿ ಮದುವೆಯಾದ ಹೆಣ್ಣು ಮಗಳು ತಂದೆ/ತಾಯಿ/ಅಣ್ಣ/ತಮ್ಮ ಇವರ ಜೊತೆ ವಾಸವಾಗಿರದೇ ಸಂಘದ ಕಾರ್ಯವ್ಯಾಪ್ತಿ ಹೊರಗೆ ವಾಸವಿದ್ದರೆ ಅಂತಹ ಸಂದರ್ಭದಲ್ಲಿ ಈ ಯೋಜನೆ ಸೌಲಭ್ಯವನ್ನು ಪಡೆಯಲು ಅರ್ಹರಾಗಿರುವುದಿಲ್ಲ. ಆದರೆ, ಅವಳೇ ಸಹಕಾರ ಸಂಘದ ಸದಸ್ಯೆಯಾಗಿ ಮೂರು ತಿಂಗಳು ಕಳೆದಿದ್ದಲ್ಲಿ ಯಶಸ್ವಿನಿ ಯೋಜನೆಯ ಸೌಲಭ್ಯ ಪಡೆಯಬಹುದಾಗಿದೆ.

- ಪ್ರಸಕ್ತ ಸಾಲಿನಲ್ಲಿ ಮದುವೆಯಾಗದ ಹೆಣ್ಣುಮಕ್ಕಳಿಗೆ ಪ್ರಧಾನ ಅರ್ಜಿದಾರರು ವಂತಿಗೆ ಪಾವತಿಸಿದ್ದು, ಆನಂತರ ಮದುವೆಯಾಗಿದ್ದಲ್ಲಿ ಅಂತಹ ಮದುವೆಯಾದ ಹೆಣ್ಣು ಮಗಳು ಪ್ರಸಕ್ತ ಸಾಲಿನಲ್ಲಿ ಯಶಸ್ವಿನಿ ಯೋಜನೆಯಡಿಯಲ್ಲಿ ಚಿಕಿತ್ಸೆ ಪಡೆಯಲು ಅರ್ಹರಿರುತ್ತಾರೆ.

- ಯಶಸ್ವಿನಿ ಯೋಜನೆಯಡಿ ಸದಸ್ಯರಾಗಲು ಯಾವುದೇ ವಯೋಮಿತಿ ನಿರ್ಬಂಧವಿರುವುದಿಲ್ಲ.

- ನವಜಾತ ಶಿಶುವಿನ ತಾಯಿ ಹೆಸರು ಯಶಸ್ವಿನಿ ಕಾರ್ಡ್‌ನಲ್ಲಿದ್ದರೆ 30 ದಿನಗಳವರೆಗೆ ತಾಯಿ ಹೆಸರು ಇರುವ ಯಶಸ್ವಿನಿ ಕಾರ್ಡಿನ ಆಧಾರದ ಮೇಲೆ ಈ ಯೋಜನೆಯಡಿಯಲ್ಲಿ ಬರುವ ಸೌಲಭ್ಯವನ್ನು ನವಜಾತ ಶಿಶು ಪಡೆಯಬಹುದು.

- ಸಮಾಪನಗೊಂಡ ಅಥವಾ ನಿಷ್ಕ್ರಿಯೆಯಾದ ಸಹಕಾರ ಸಂಘಗಳ ಸದಸ್ಯರು ಮತ್ತು ನೌಕರರ ಸಹಕಾರ ಸಂಘಗಳ ಸದಸ್ಯರಿಗೆ ಈ ಯೋಜನೆ ಅನ್ವಯಿಸುವುದಿಲ್ಲ.

- ಪ್ರಧಾನ ಅರ್ಜಿದಾರರು ಮತ್ತು ಅವನ ಕುಟುಂಬದ ಯಾವುದೇ ಸದಸ್ಯನು ಸರ್ಕಾರಿ ನೌಕರರಾಗಿ ಅಥವಾ ಖಾಸಗಿ ಕಂಪನಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ವೇತನ ಪಡೆಯುತ್ತಿದ್ದಲ್ಲಿ ಈ ಯೋಜನೆಗೆ ಅರ್ಹರಿರುವುದಿಲ್ಲ. ಪ್ರಧಾನ ಅರ್ಜಿದಾರರು ಅಥವಾ ಅವನ ಕುಟುಂಬದ ಸದಸ್ಯರು ಯಾವುದೇ ವಿಮಾ ಯೋಜನೆಯಡಿಯಲ್ಲಿ ಸದಸ್ಯನಾಗಿದ್ದಲ್ಲಿ ಅಂತಹವರು ಯಶಸ್ವಿನಿ ಯೋಜನೆಯಡಿ ಸದಸ್ಯನಾಗಲು ಅರ್ಹನಿರುವುದಿಲ್ಲ.

## ಅರ್ಜಿಸಲ್ಲಿಸುವಿಕೆ ಮತ್ತು ದಾಖಲಾತಿ:

- ಅಗತ್ಯ ದಾಖಲಾತಿ ಸಮೇತ ನಿಮ್ಮ ಹತ್ತಿರದ ಸಹಕಾರಿ ಸಂಘ (ಸೊಸೈಟಿ) ಶಾಖೆ ಭೇಟಿ ಮಾಡಿ ಅರ್ಜಿ ಸಲ್ಲಿಸಬೇಕು.

- ಅಗತ್ಯ ದಾಖಲಾತಿ ಮಾಹಿತಿಗಳಾದ ಪಡಿತರ ಚೀಟಿ ಪ್ರತಿ, ಪ್ರತಿಯೊಬ್ಬ ಸದಸ್ಯರ ಆಧಾರ್ ಕಾರ್ಡ್, ಪ್ರತಿಯೊಬ್ಬರ ಎರಡು ಪೋಟೋ ಮತ್ತು ಪರಿಶಿಷ್ಟ ಜಾತಿ/ಪಂಗಡದ ಸದಸ್ಯರು ಕುಟುಂಬದ ಪ್ರತಿಯೊಬ್ಬರ ಆರ್ ಡಿ ನಂಬರ್ ಇರುವ ಜಾತಿ ಪ್ರಮಾಣ ಪತ್ರದ ಪ್ರತಿಯನ್ನು ಸಲ್ಲಿಸಬೇಕು.

- ಸದಸ್ಯರು ಕಡ್ಡಾಯವಾಗಿ ತಮ್ಮ ಮೊಬೈಲ್ ಸಂಖ್ಯೆಯನ್ನು ಒದಗಿಸತಕ್ಕದು.

## ನೋಂದಣಿ ಪ್ರಕ್ರಿಯೆ:

- 2022–23ನೇ ಸಾಲಿಗೆ ನೋಂದಣಿ ಪ್ರಕ್ರಿಯೆಯನ್ನು ದಿನಾಂಕ:01–11–2022 ರಿಂದ ಪ್ರಾರಂಭಿಸಲಾಗಿದ್ದು, ಡಿಸೆಂಬರ್ 2022 ರವರೆಗೆ ಮುಂದುವರೆಯಲಿದೆ.

- 2022–23ನೇ ಯಶಸ್ವಿನಿ ಯೋಜನೆಯ ಅವಧಿ ದಿನಾಂಕ:01–01–2023 ರಿಂದ ಪ್ರಾರಂಭಗೊಂಡು ದಿನಾಂಕ:31–12–2023 ರವರೆಗೆ ಜಾರಿಯಲ್ಲಿರುತ್ತದೆ.

**ಯೂನಿಕ್ ಐಡಿ ಸಂಖ್ಯೆ ಕಾರ್ಡ್:**

- ಯಶಸ್ವಿನಿ ಯೋಜನೆಯಡಿ ಸದಸ್ಯರಿಗೆ ಯೂನಿಕ್ ಐಡಿ ಸಂಖ್ಯೆಯುಳ್ಳ ಪ್ಲಾಸ್ಟಿಕ್ ಗುರುತಿನ ಕಾರ್ಡ್‌ನ್ನು ಒದಗಿಸಲಾಗುವುದು. ಸದರಿ ಕಾರ್ಡಿನಲ್ಲಿ ಪ್ರಾಥಮಿಕ ಸದಸ್ಯರ ಸಹಕಾರ ಸಂಘದ ಸದಸ್ಯತ್ವದ ವಿವರಗಳು ಮತ್ತು ಅವರ ಕುಟುಂಬ ಸದಸ್ಯರ ವಿವರಗಳು, ಪಾವತಿಸಿದ ವಾರ್ಷಿಕ ವಂತಿಗೆ ವಿವರ ಹಾಗೂ ಭಾವ ಚಿತ್ರದ ವಿವರಗಳ ಮಾಹಿತಿಯು ಸಂಗ್ರಹಣೆ ಆಗಿರುತ್ತದೆ. ಇದರಲ್ಲಿ ಕುಟುಂಬದ ವಾರ್ಷಿಕ ವೈದ್ಯಕೀಯ ವೆಚ್ಚದ ಮಿತಿಯನ್ನು ಸಹ ಕಾರ್ಡಿನಲ್ಲಿ ನಮೂದಿಸಲಾಗಿರುತ್ತದೆ.
- ಸದರಿ ಕಾರ್ಡ್‌ನ್ನು ನೆಟ್‌ವರ್ಕ್ ಆಸ್ಪತ್ರೆಗಳಲ್ಲಿ ಹಾಗೂ ಟಿಪಿಎ ಸಂಸ್ಥೆಯಲ್ಲಿ ಉಪಯೋಗಿಸಿದಾಗ ಪ್ರಧಾನ ಅರ್ಜಿದಾರರು ಹಾಗೂ ಅವರ ಅವಲಂಬಿತರ ಸಂಪೂರ್ಣ ಮಾಹಿತಿ ಲಭ್ಯವಾಗುವ ರೀತಿಯಲ್ಲಿ ತಂತ್ರಜ್ಞಾನ ಅಳವಡಿಸಿಕೊಳ್ಳಲಾಗಿದೆ.

**ಯಶಸ್ವಿನಿ ಕಾರ್ಡ್ ಸದಸ್ಯರಿಗೆ ದೊರೆಯುವ ಸೌಲಭ್ಯಗಳು:**

- ಯಶಸ್ವಿನಿ ಯೋಜನೆಯಡಿ ನೋಂದಾಯಿತ ಸದಸ್ಯರು ಗುರುತಿನ ಚೀಟಿಯನ್ನು ಬಳಸಿ ನಗದು ರಹಿತ ಚಿಕಿತ್ಸೆಗಳನ್ನು ಪಡೆಯಬಹುದಾಗಿದೆ.
- ಯಶಸ್ವಿನಿ ಯೋಜನೆಯಡಿಯಲ್ಲಿ ಮುಖ್ಯವಾಗಿ ಹೃದಯಕ್ಕೆ ಸಂಬಂಧಿಸಿದ ರೋಗಗಳು ಕಿವಿ, ಮೂಗು, ಗಂಟಲು ವ್ಯಾದಿಗಳು, ಕರುಳಿನ ಖಾಯಿಲೆಗಳು, ನರಗಳಿಗೆ ಸಂಬಂಧಿಸಿದ ಖಾಯಿಲೆಗಳು, ಕಣ್ಣಿನ ಖಾಯಿಲೆಗಳು, ಮೂಳೆ ರೋಗಗಳು, ಸ್ತ್ರೀಯರಿಗೆ ಸಂಬಂಧಿಸಿದ ಖಾಯಿಲೆಗಳು ಹಾಗೂ ಈ ಯೋಜನೆಯಡಿ ಇತರೆ ಅನುಸೂಚಿತ ಸಾಮಾನ್ಯ ರೋಗಿಗಳಿಗೆ ಸಂಬಂಧಿಸಿದ ಚಿಕಿತ್ಸಾ ಸೌಲಭ್ಯಗಳನ್ನು ರಾಜ್ಯದ ಯಶಸ್ವಿನಿ ನೆಟ್‌ವರ್ಕ್ ಆಸ್ಪತ್ರೆಗಳಲ್ಲಿ ಒದಗಿಸಲಾಗುವುದು.
- ಯಶಸ್ವಿನಿ ಸದಸ್ಯರು ಜನರಲ್ ವಾರ್ಡ್‌ನಲ್ಲಿ ಸೌಲಭ್ಯ ಪಡೆಯುವಲ್ಲಿ ಅರ್ಹತೆ ಹೊಂದಿರುತ್ತಾರೆ. ಯಶಸ್ವಿನಿ ಯೋಜನೆಯಡಿ ನೆಟ್‌ವರ್ಕ್ ಆಸ್ಪತ್ರೆಯಲ್ಲಿ ಒದಗಿಸಿರುವ ಚಿಕಿತ್ಸಾ ಸೌಲಭ್ಯದಲ್ಲಿ ಔಷಧಿ ವೆಚ್ಚ, ಆಸ್ಪತ್ರೆ ವೆಚ್ಚ, ಶಸ್ತ್ರಚಿಕಿತ್ಸೆಯ ವೆಚ್ಚ, ಆಪರೇಶನ್ ಥಿಯೆಟರ್ ಬಾಡಿಗೆ, ಅರವಳಿಕೆ ತಜ್ಞರ ಫೀ, ಸರ್ಜನ್ ಫೀ, ಕನ್ಸಲ್‌ಟೆಂಟ್ ಫೀ, ಬೆಡ್ ಚಾರ್ಜ್, ನರ್ಸ್ ಫೀ ಇತ್ಯಾದಿ ವೆಚ್ಚ ಒಳಗೊಂಡಿರುತ್ತದೆ.
- ನೆಟ್‌ವರ್ಕ್ ಆಸ್ಪತ್ರೆಗಳಲ್ಲಿ ಯಶಸ್ವಿನಿ ಸದಸ್ಯರಿಗೆ ಹೊರ ರೋಗಿ ಚಿಕಿತ್ಸೆಗೆ (OPD) ಗರಿಷ್ಟ ರೂ.200/–ಗಳನ್ನು (ಮೂರು ತಿಂಗಳ ಅವಧಿಗೆ) ಮಿತಿ ನಿಗಧಿಪಡಿಸಿದ್ದು, ನೆಟ್‌ವರ್ಕ್ ಆಸ್ಪತ್ರೆಗಳು ಇದಕ್ಕಿಂತ ಹೆಚ್ಚಿನ ಶುಲ್ಕವನ್ನು ಸದಸ್ಯರಿಗೆ ವಿಧಿಸತಕ್ಕದಲ್ಲ. ಈ ಪೈಕಿ ರೂ.100/– ಯಶಸ್ವಿನಿ ಟ್ರಸ್ಟ್‌ವತಿಯಿಂದ ಪಾವತಿಸಲಾಗುವುದು.
- ಯಶಸ್ವಿನಿ ಕಾರ್ಡ್ ಪಡೆದ ಹದಿನೈದು (15) ದಿನಗಳ ನಂತರ ಯಶಸ್ವಿನಿ ಕಾರ್ಡುದಾರರು ನೆಟ್‌ವರ್ಕ್ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಲು ಅರ್ಹರಾಗಿರುತ್ತಾರೆ.

**ಚಿಕಿತ್ಸಾ ಸೌಲಭ್ಯ ಪಡೆಯಲು ಅನುಸರಿಸಬೇಕಾದ ಕ್ರಮಗಳು:**

- ಯೂನಿಕ್ ಐಡಿ ಸಂಖ್ಯೆ ಹೊಂದಿರುವ ಗುರುತಿನ ಕಾರ್ಡುಗಳನ್ನು ಸದಸ್ಯರು ನೆಟ್‌ವರ್ಕ್ ಆಸ್ಪತ್ರೆಗಳಿಗೆ ಚಿಕಿತ್ಸೆಗಾಗಿ ಭೇಟಿ ನೀಡಿದಾಗ ಕಡ್ಡಾಯವಾಗಿ ಹಾಜರು ಪಡಿಸಬೇಕು. ಚಿಕಿತ್ಸೆ ಪಡೆಯುವಲ್ಲಿ ಏನಾದರೂ ಸಮಸ್ಯೆ ಉಂಟಾದಲ್ಲಿ

ಸದಸ್ಯರು ಯಶಸ್ವಿನಿ ಟ್ರಸ್ಟ್, ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರು ಅಥವಾ ಅನುಷ್ಠಾನ ಸಂಸ್ಥೆಯನ್ನು ಸಂಪರ್ಕಿಸಬೇಕು.

- ಗುರುತಿನ ಕಾರ್ಡ್‌ನ್ನು ಸದಸ್ಯರು ಬೇರೆಯವರಿಗೆ ವರ್ಗಾಯಿಸತಕ್ಕದ್ದಲ್ಲ. ಯಾವುದೇ ಫಲಾನುಭವಿ ತಪ್ಪು ಮಾಹಿತಿ ನೀಡಿ ಯಶಸ್ವಿನಿ ಯೋಜನೆ ನಿಯಮಗಳಿಗೆ ವಿರುದ್ಧವಾಗಿ ಕಾರ್ಡ್‌ನ್ನು ಪಡೆದುಕೊಂಡಲ್ಲಿ ಅಥವಾ ದುರ್ಬಳಕೆ ಮಾಡಿಕೊಂಡಲ್ಲಿ ಅಂತಹ ಕಾರ್ಡನ್ನು ರದ್ದು ಪಡಿಸಲಾಗುವುದು ಮತ್ತು ಕಾನೂನಿನ ಕ್ರಮಕ್ಕೆ ಗುರಿಪಡಿಸಲಾಗುವುದು.

ಮುಖ್ಯಕಾರ್ಯನಿರ್ವಹಣಾಧಿಕಾರಿ
ಯಶಸ್ವಿನಿ ಟ್ರಸ್ಟ್